ರಾ ಗ – ಕಾ ನ ಡ : ತಾ ಳ – ಖ ಂ ಡ ಛಾ ಪು ತಾ ಳ

ಆವ ರೋಗವೊ ಎನಗೆ ದೇವಧನ್ವಂತ್ರಿ । ಪ ।
ಸಾವಧಾನದಿ ಕೈಯ ಪಿಡಿದು ನೀ ನೋಡಯ್ಯ । ಅ ಪ ।
ಹರಿ ಮೂರ್ತಿಗಳು ಕಾಣಿಸವು ಎನ್ನ ಕಂಗಳಿಗೆ
ಹರಿಯ ಕೀರ್ತನೆಯು ಕೇಳಿಸದೆನ್ನ ಕಿವಿಗೆ
ಹರಿ ಮಂತ್ರಸ್ತೋತ್ರ ಬಾರದು ಎನ್ನ ನಾಲಿಗೆಗೆ
ಹರಿ ಪ್ರಸಾದವು ಜಿಹ್ವೆಗೆ ಸವಿಯಾಗದಯ್ಯ । ೧ ।
ಹರಿಪಾದ ಸೇವೆಗೆನ್ನ ಹಸ್ತಗಳು ಚಲಿಸವು
ಗುರುಹಿರಿಯರಂಘ್ರಿಗೆ ಶಿರ ಬಾಗದು
ಹರಿಯ ನಿರ್ಮಾಲ್ಯವಾಘ್ರಾಣಿಸದು ನಾಸಿಕವು
ಹರಿಯಾತ್ರೆಗಳಿಗೆನ್ನ ಕಾಲೇಳದಯ್ಯ । ೨ ।
ಅನಾಥಬಂಧು ಗೋಪಾಲವಿಟ್ಠಲರೇಯ
ಎನ್ನ ಭಾಗದ ವೈದ್ಯ ನೀನೆಯಾದೆ
ಅನಾದಿ ಕಾಲದ ಭವರೋಗ ಕಳೆಯಯ್ಯ
ನಾನೆಂದಿಗು ಮರೆಯೆ ನೀ ಮಾಡಿದುಪಕಾರ । ೩ ।

ಧನ್ವಂತರಿ ಸುಳಾದಿ

। ಧ್ರುವತಾಳ ।
ಆಯು ವೃದ್ಧಿಯಾಗೋದು ಶ್ರೇಯಸ್ಸು ಬರುವುದು
ಕಾಯಾ ನಿರ್ಮಲಿನಾ ಕಾರಣವಾಹುದೋ
ಮಾಯಾ ಹಿಂದಾಗುವುದು ನಾನಾ ರೋಗದ ಬೀಜ
ಬೇಯಿಸಿ ಕಳೆವುದು ವೇಗದಿಂದ
ನಾಯಿ ಮೊದಲಾದ ಕುತ್ಸಿತ ದೇಹನಿ–
ಕಾಯವ ತೆತ್ತು ದುಷ್ಕರ್ಮದಿಂದ
ಕ್ರೀಯಮಾಣ ಸಂಚಿತ ಭರಿತವಾಗಿದ್ದ ದು:ಖ
ಹೇಯ ಸಾಗರದೊಳು ಬಿದ್ದು ಬಳಲೀ

ನೋಯಿಸಿಕೊಂಡು ನೆಲೆ ಗಾಣದೆ ಒಮ್ಮೆ ತನ್ನ
ಬಾಯಿಲಿ ವೈದ್ಯ ಮೂರ್ತಿ ಶ್ರೀ ಧನ್ವಂತ್ರಿ
ರಾಯ ರಾಜೌಷಧಿ ನಿಯಾಮಕಕರ್ತ
ಶ್ರೀಯರಸನೆಂದು ತುತಿಸಲಾಗಿ
ತಾಯಿ ಒದಗಿ ಬಂದು ಬಾಲನ್ನ ಸಾಕಿದಂತೆ
ನೋಯಗೊಡದೆ ನಮ್ಮನ್ನು ಪಾಪಿಪಾ-
ಧ್ಯೇಯಾ ದೇವಾದಿಗಳಿಗೆ ಧರ್ಮಜ್ಞ ಗುಣಸಾಂದ್ರ
ಶ್ರೇಯಸ್ಸು ಕೊಡುವನು ಭಜಕರಿಗಿ
ಮಾಯಾ ಮಂತ್ರದಿಂದ ಜಗವೆಲ್ಲ ವ್ಯಾಪಿಸಿ ಸ
ನ್ಯಾಯವಂತನಾಗಿ ಚೇಷ್ಟೆ ಮಾಳ್ಪಾ
ವಾಯುವಂದಿತ ನಿತ್ಯ ವಿಜಯವಿಠಲರೇಯಾ
ಪ್ರಿಯನು ಕಾಣೊ ನಮಗೆ ಅನಾದಿ ರೋಗ ಕಳೆವ । ೧ ।

। ಮಟ್ಟತಾಳ ।
ಧನ್ವಂತ್ರಿ ಶ್ರೀ ಧನ್ವಂತ್ರಿ ಎಂದು
ಸನ್ನುತಿಸಿ ಸತತ ಭಿನ್ನ ಜ್ಞಾನದಿಂದ
ನಿನ್ನವ ನಿನ್ನವನೊ ಘನ್ನತಿಯಲಿ ನೆನೆದ
ಮನ್ನೂಜ ಭುವನದೊಳು ಧನ್ಯನು ಧನ್ಯನೆನ್ನಿ
ಚನ್ನ ಮೂರುತಿ ಸುಪ್ರಸನ್ನ ವಿಜಯ ವಿಠ್ಠ-
ಲನ್ನ ಸತ್ಯವೆಂದು ಬಣ್ಣಿಸು ಬಹುವಿಧದಿ । ೨ ।

। ತ್ರಿವಿಡಿತಾಳ ।
ಶಶಿಕುಲೋದ್ಭವ ದೀರ್ಘತಮನಂದನ ದೇವಾ
ಶಶಿವರ್ಣ ಪ್ರಕಾಶ ಪ್ರಭುವೆ ವಿಭುವೆ
ಶಶಿಮಂಡಲ ಸಂಸ್ಥಿತ ಕಲಶ ಕಲಶಪಾಣಿ
ಬಿಸಜಲೋಚನ ಅಶ್ವಿನೇಯ ವಂದ್ಯಾ
ಶಶಿಗರ್ಭ ಭೂರುಹ ಲತೆಪೊದೆತಾಪ ಓ-
ಡಿಸವೌಷದಿ ತುಲಸಿ ಜನಕ

ಅಸುರ ನಿರ್ಜರತತಿ ನೆರೆದು ಗಿರಿಯ ತಂದು
ಮಿಸುಕದಲೆ ಮಹೋದಧಿ ಮರ್ದಿಸಲಾಗಿ
ನಸುನಗುತ ಪುಟ್ಟಿದೆ ಪೀಯೂಷಘಾತ ಧರಿಸಿ
ಅಸಮ ದೈವನೆ ನಿನ್ನ ಮಹಿಮೆಗೆ ನಮೋ
ಬಿಸಜ ಸಂಭವ ರುದ್ರ ಮೊದಲಾದ ದೇವತಾ
ಋಷಿನಿಕರ ನಿನ್ನ ಕೊಂಡಾಡುವರೊ
ದಶದಿಶದೊಳು ಮೆರೆದ ವಿಜಯವಿಠಲ ಭಿಷ್ಕಾ
ಆಸು ಇಂದ್ರಿಯಂಗಳ ರೋಗ ನಿವಾರಣ । ೩ ।

। ಅಟ್ಟತಾಳ ।
ಶರಣು ಶರಣು ಧನ್ವಂತರಿ ತಮೋ ಗುಣ ನಾಶ
ಶರಣು ಆರ್ತಜನ ಪರಿಪಾಲಕ ದೇವತ-
ರುವೆ ಭವತಾಪ ತರುಣ ದಿತಿಸುತ
ಹರಣಮೋಹಕ ಲೀಲಾ ಪರಮ
ಪೂರ್ಣ ಬ್ರಹ್ಮ ಬ್ರಹ್ಮ ಉದ್ಧಾರಕ
ಉರು ಪರಾಕ್ರಮ ಉರಗಶಾಯಿ
ವರ ಕಿರೀಟ ಮಹಾಮಣಿ ಕುಂಡಲ ಕರ್ಣ
ಮಿರುಗುವ ಹಸ್ತ ಕಂಕಣ ಹಾರಪದಕ ತಾಂ-
ಬರ ಕಾಂಚೀಪೀತಾಂಬರ ಚರಣ ಭೂಷಾ
ಸಿರಿವತ್ಸಲಾಂಛನ ವಿಜಯವಿಠಲರೇಯಾ
ತರುಣಗಾತುರ ಜ್ಞಾನ ಮುದ್ರಾಂಕಿತ ಹಸ್ತಾ । ೪ ।

। ಆದಿತಾಳ ।
ಏಳುವಾಗಲಿ ಮತ್ತೆ ತಿರಿಗಿ ತಿರುಗತಲಿ
ಬೀಳುವಾಗಲಿ ನಿಂತು ಕುಳ್ಳಿರುವಾಗಲಿ
ಹೇಳುವಾಗಲಿ ಮಾತು ಕೇಳುವಾಗಲಿ ಕರೆದು
ಪೇಳುವಾಗಲಿ ಪೋಗಿ ಸತ್ಕರ್ಮ ಮಾಡುವಾಗ
ಬಾಳುವಾಗಲಿ ಭೋಜನ ನಾನಾ ಷಡ್ರಸ ಸಂ-

ಮ್ಮೇಳವಾಗಲಿ ಮೇಲು ಪುತ್ರಾದಿ ಒಡನೊಡನೆ
ಖೇಳವಾಗಿ ಮನುಜ ಮರ್ಯಾದೆ ನಿನ್ನಯ
ನಾಲಿಗೆ ಕೊನೆಯಲ್ಲಿ ಧನ್ವಂತರಿ ಎಂದು ಒಮ್ಮೆ
ಕಾಲ ಅಕಾಲದಲಿ ಸ್ಮರಿಸಿದರೆ ಅವಗೆ
ವ್ಯಾಳಿ ವ್ಯಾಳಿಗೆ ಬಾಹ ಭವಬೋಜ ಪರಿಹಾರ
ನೀಲ ಮೇಘ ಶ್ಯಾಮ ವಿಜಯ ವಿಠಲರೇಯಾ
ವಾಲ ಕೊಡುವನು ಮುಕ್ತರ ಸಂಗದಲಿ । ೫ ।

ಜತೆ

ಧಂ ಧನ್ವಂತರಿ ಎಂದು ಪ್ರಣವ ಪೂರ್ವಕದಿಂದ
ವಂದಿಸಿ ನೆನೆಯಲಿ ವಿಜಯವಿಠಲ ಒಲಿವ ।

---

ಎನ್ನ ಬಿನ್ನಪ ಕೇಳು ಧನ್ವಂತ್ರಿ ದಯಮಾಡು ಸಣ್ಣವನು ಇವ ಕೇವಲ
ಬನ್ನಬಡಿಸುವ ರೋಗವನ್ನು ಮೋಚನೆ ಮಾಡಿ ಚೆನ್ನಾಗಿ ಪಾಲಿಸುವುದು ಕರುಣಿ |ಪ|

ಆರೋಗ್ಯ ಆಯುಷ್ಯ ಐಶ್ವರ್ಯವೆಂಬೊ ಈ ಮೂರುವಿಧ ವಸ್ತುಗಳು
ನಾರಾಯಣನ ಭಜಕರಾದವರ ಸಾಧನಕೆ ಪೂರ್ಣವಾಗಿಪ್ಪವು
ಘೋರ ವ್ಯಭಿಚಾರ ಪರನಿಂದೆ ಪರ ವಿತ್ತಾಪಹಾರ ಮಾಡಿದ ದೋಷದಿ
ದರಿದ್ರರಾಗುವರು ಮೂರು ವಿಧದಿಂದಲಿ
ಕಾರಣನು ನೀನೆ ದುಷ್ಕರ್ಮ ಪರಿಹರಿಸುವುದು ಹರಿಯೆ |1|

ವಸುಮತಿಯ ಮೇಲಿನ್ನು ಅಸುರ ಜನರೆ ಬಹಳ ವಶವಲ್ಲ ಕಲಿಯ ಬಾಧೆ
ಬಿಸಿಲಿಂದ ಪೀಡಿತವಾದ ಸಸಿಗಳಂತೆ ಶಿಶುಗಳು ನಾವಿಪ್ಪೆವು
ಅಸುರಾರಿ ನಿನ್ನ ಕರುಣಾಮೃತದ ಮಳೆಗರೆದು ಕುಶಲದಿ ಪಾಲಿಸುವುದು
ಕೆಸರಿಂದ ಕೆಸರು ತೊಳೆದಂತೆ ಕರ್ಮದ ಪಥವು ಅಸುನಾಥ ಹರಿಯೆ ಪೊರೆಯೊ ಸ್ವಾಮಿ |2|

ಆದಿವ್ಯಾಧಿಗಳು ಉನ್ಮಾದ ವಿಭ್ರಮ ನಾನಾ ಬಾಧೆಗೌಷಧವು ನೀನೆ
ಹೇ ದೇವ ನಿನ್ನ ಕರಕುಶಲ ಸುಧೆವೆರೆದು ಸಾಧುಗಳ ಸಂತೈಸುವಿ
ಮೋದ ಬಡಿಸುವಿ ನಿನ್ನ ಸಾಧಿಸುವರಿಗೆ ಶುಭೋದಯಂಗಳನೀವಿ
ಆದರಿಸಿ ಇವಗೆ ತವ ಪಾದ ಧ್ಯಾನವನಿತ್ತು ಸಾಧುಗಳೊಳಗಿಟ್ಟು ಮೋದಕೊಡು ಸರ್ವದಾ 3

ಅನ್ಯರನು ಭಜಿಸದಲೆ ನಿನ್ನನೆ ಸ್ತುತಿಸುತ ನಿನ್ನ ಚಿಹ್ನೆಗಳ ಧರಿಸಿ
ನಿನ್ನವರವನೆನಿಸಿ ನಿನ್ನ ನಾಮೋಚ್ಚರಿಸಿ ನಿನ್ನಿಂದ ಉಪಜೀವಿಸಿ
ಅನ್ನ ಆರೋಗ್ಯಕ್ಕೆ ಅಲ್ಪಜೀವಿಗಳಿಗೆ ಇನ್ನು ಆಲ್ಪರಿಯಬೇಕೆ
ನಿನ್ನ ಸಂಕಲ್ಪ ಭಕ್ತರ ಪೋಷಕನೆಂಬ ಘನ್ನ ಬಿರು ದಿನ್ನು ಉಳುಹೊ ಸಲಹೊ 4

ನಿನ್ನವರಲಿ ಇವಗೆ ಇನ್ನು ರತಿಯನ್ನು ಕೊಟ್ಟು ನಿನ್ನವನೆಂದು ಅರಿದು
ನಿನ್ನ ನಾ ಪ್ರಾರ್ಥಿಸಿದೆ ಅನ್ಯರಿಗೆ ಆಲ್ಪರಿಯೆ ಎನ್ನ ಪಾಲಿಸುವ ದೊರೆಯೆ
ಎನ್ನ ಮಾತಲ್ಲವಿದು ಎನ್ನ ಹಿರಿಯರ ಮಾತು ಮನ್ನಿಸಬೇಕು ಕರುಣಿ
ಅನಂತ ಗುಣಪೂರ್ಣ ಗೋಪಾಲವಿಠಲ ಇನ್ನಿದನೆ ಪಾಲಿಸುವುದೊ ಸ್ವಾಮಿ